# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 810

**ಮಾನ್ಯ ಸದಸ್ಯರ ಹೆಸರು** : ಶ್ರೀ ಬಸನಗೌಡ ಬಾದರ್ಲಿ (ವಿಧಾನ ಸಭೆಯಿಂದ)

**ಉತ್ತರಿಸಬೇಕಾದ ದಿನಾಂಕ** : 13.03.2025

**ಉತ್ತರಿಸುವ ಸಚಿವರು** : ಕಾನೂನು, ನ್ಯಾಯ, ಮಾನವ ಹಕ್ಕುಗಳು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿನ ಪ್ರಸಿದ್ಧ ಪ್ರವಾಸಿ ತಾಣವಾದ ಸುಕ್ಷೇತ್ರ ಸಿದ್ಧಿಪರ್ವತ ಅಂಬಾ ಮಠದಲ್ಲಿರುವ ಅಂಬಾದೇವಿ ದೇವಸ್ಥಾನಕ್ಕೆ 343 ವರ್ಷಗಳ ಇತಿಹಾಸವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಇಲ್ಲಿ ನಡೆಯುವ ಜಾತ್ರೆಗೆ ಕರ್ನಾಟಕ ಸೇರಿದಂತೆ ಆಂಧ್ರ ಪ್ರದೇಶ, ಮಹಾರಾಷ್ಟ್ರ ರಾಜ್ಯಗಳಿಂದ ಅಧಿಕ ಸಂಖ್ಯೆಯಲ್ಲಿ ಭಕ್ತರು ಇಲ್ಲಿಗೆ ಆಗಮಿಸುವುದರಿಂದ ಶ್ರೀ ಮಠದ ನೂತನ ಶಿಲಾ ಮಂಟಪವನ್ನು ಸ್ಥಾಪಿಸಲು ಹಾಗೂ ಮಠದ ಸರ್ವಾಂಗೀಣ ಅಭಿವೃದ್ಧಿಪಡಿಸಲು ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ? | ಹೌದು.<br><br>ದಿನಾಂಕ:06.03.2025ರ ಪತ್ರದಲ್ಲಿ ಕೇಂದ್ರ ಪ್ರವಾಸೋದ್ಯಮ ಮಂತ್ರಾಲಯದ ಪ್ರಸಾದ್ 2.0 ಯೋಜನೆಯಡಿ ಸದರಿ ದೇವಸ್ಥಾನವನ್ನು ರೂ.10.00 ಕೋಟಿಗಳ ಅಂದಾಜು ವೆಚ್ಚದಲ್ಲಿ ಸಮಗ್ರವಾಗಿ ಅಭಿವೃದ್ಧಿ ಪಡಿಸಲು ವಿವರವಾದ ಯೋಜನಾ ವರದಿ (ಡಿ.ಪಿ.ಆರ್) ಸಿದ್ಧಪಡಿಸಿ ಸಲ್ಲಿಸುವಂತೆ ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ, ರಾಯಚೂರು ಜಿಲ್ಲೆ, ರಾಯಚೂರು ಇವರನ್ನು ಕೋರಲಾಗಿರುತ್ತದೆ. ಜಿಲ್ಲಾಧಿಕಾರಿಗಳಿಂದ ಪ್ರಸ್ತಾವನೆ ನಿರೀಕ್ಷಿಸಲಾಗಿದೆ. |

**TOR 68 TDV 2025**

**(ಎಚ್.ಕೆ.ಪಾಟೀಲ್)**
ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ
ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ
ಪ್ರವಾಸೋದ್ಯಮ ಸಚಿವರು